ಕರ್ನಾಟಕ ವಿಧಾನ ಪರಿಷತ್ತು

(2)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**1556 (1874)**
ಸದಸ್ಯರ ಹೆಸರು	:	ಶ್ರೀ ವೈ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	22.03.2021
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢ ಶಾಲಾ ಸಹ ಶಿಕ್ಷಕರಾಗಿ, ಅದೇ ರೀತಿ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಕಾಲೇಜಿಗೆ ಉಪನ್ಯಾಸಕರಾಗಿ ಬಡ್ತಿ ಹೊಂದಿ 10, 15, 20 ವರ್ಷಗಳ ಕಾಲಮಿತಿ ಬಡ್ತಿ ಪಡೆಯುವಾಗ ವೇತನ ತಾರತಮ್ಯವಾಗಿ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಹಾಗಿದ್ದಲ್ಲಿ, ಈ ತಾರತಮ್ಯ ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಬಡ್ತಿ ಹೊಂದಿದ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಲ್ಲಿ 10,15 ವರ್ಷದ ಬಡ್ತಿಯನ್ನು ಸೇವಾ ಅವಧಿಯಲ್ಲಿ ಪಡೆಯದೇ ಇದ್ದಲ್ಲಿ ಅಂತಹ ಪ್ರೌಢಶಾಲಾ ಸಹ ಶಿಕ್ಷಕರು ಪ್ರೌಢಶಾಲಾ ಹುದ್ದೆಯಲ್ಲಿ 10,15 ವರ್ಷ ಪೂರ್ಣಗೊಳಿಸಿದ ನಂತರ ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2012(8), ದಿನಾಂಕ:14/062012ರಲ್ಲಿ ತಿಳಿಸಿರುವಂತೆ ಸೇವಾವಧಿಯಲ್ಲಿ ಒಂದೂ ಪದೋನ್ನತಿಯನ್ನು ಪಡೆಯದೇ ಇರುವ ಶಿಕ್ಷಕರಿಗೆ 20,25,30 ವರ್ಷಗಳ ವಿಶೇಷ ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರಾತಿ ಮಾಡಲು ಅವಕಾಶವಿರುತ್ತದೆ. ಆದರೆ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹ ಶಿಕ್ಷಕರ ಹುದೆಗೆ ಬಡ್ತಿ ಪಡೆದಿರುವುದರಿಂದ ಅಂದರೆ ಸದರಿ ಶಿಕ್ಷಕರುಗಳು ತಮ್ಮ ಸೇವಾವಧಿಯಲ್ಲಿ ಪದೋನ್ನತಿ ಪಡೆದಿರುವುದರಿಂದ 20,25,30 ವರ್ಷಗಳ ಹೆಚ್ಚುವರಿ ವಿಶೇಷ ವೇತನ ಬಡ್ತಿ ಮಂಜೂರಾತಿಗೆ ಅವಕಾಶವಿರುವುದಿಲ್ಲ. 6ನೇ ವೇತನ ಆಯೋಗದ ಶಿಫಾರಸ್ಸಿನಂತೆ ಈ ಗೊಂದಲವನ್ನು ಹೋಗಲಾಡಿಸುವ ಕುರಿತಂತೆ ಇಡಿ 147 ಎಸ್‌ಓಹೆಚ್ 2015ರಲ್ಲಿ ಆರ್ಥಿಕ ಇಲಾಖೆಯನ್ನು ಸಮಾಲೋಚಿಸಲಾಗಿ, ಆರ್ಥಿಕ ಇಲಾಖೆಯು ಅಭಿಪ್ರಾಯಿಸಿರುವ ಪ್ರಮುಖ ಸಾರಾಂಶವು ಈ ಕೆಳಕಂಡಂತಿದೆ. "ಹಿರಿಯ ಮತ್ತು ಕಿರಿಯ ಸರ್ಕಾರಿ ನೌಕರರ ವೇತನದಲ್ಲಿನ

		ತಾರತಮ್ಯವನ್ನು ನಿವಾರಿಸಲು ಪ್ರಸ್ತುತ ಚಾಲ್ತಿಯಲ್ಲಿರುವ ವೇತನ ಎತ್ತರಿಕೆ(ಹೆಚ್ಚಳ) ನಿಯಮಗಳು/ಆದೇಶಗಳಲ್ಲಿ ಸರ್ವೇಸಾಮಾನ್ಯವಾಗಿ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳನ್ನು ವಿಧಿಸಲಾಗಿರುತ್ತದೆ. (ಅ) ಹಿರಿಯ ಮತ್ತು ಕಿರಿಯ ಸರ್ಕಾರಿ ನೌಕರರು ಒಂದೇ ಪದವೃಂದಕ್ಕೆ ಸೇರಿದವರಾಗಿರಬೇಕು ಮತ್ತು (ಆ) ಹಿರಿಯ ಮತ್ತು ಕಿರಿಯ ಸರ್ಕಾರಿ ನೌಕರರ ನಡುವಿನ ವೇತನದಲ್ಲಿನ ಅಸಮಾನತೆಯು ಒಂದೇ ಪದವೃಂದದಲ್ಲಿ ಲಭ್ಯವಿದ್ದ ವೇತನ ಬಡ್ತಿ/ಮುಂಬಡ್ತಿ ಸೌಲಭ್ಯಗಳನ್ನು ಮಂಜೂರು ಮಾಡಿರುವ ಕಾರಣದಿಂದ ಮಾತ್ರ ಉದ್ಭವಿಸಿರಬೇಕು. ಪ್ರಸ್ತುತ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಅವರು ಧಾರಣೆ ಮಾಡಿದ ಹುದ್ದೆಯಲ್ಲಿ ಕ್ರಮವಾಗಿ 10, 15, 20, 25 ಮತ್ತು 30 ವರ್ಷಗಳ ಪದೋನ್ನತಿ ರಹಿತ ಸೇವೆಗಾಗಿ ಲಭ್ಯವಿರುವ ಸೌಲಭ್ಯಗಳನ್ನು ಭಾಗಶ: ಪಡೆದ ನಂತರ ಅಥವಾ ಅವುಗಳನ್ನು ಪಡೆಯುವ ಪೂರ್ವದಲ್ಲಿಯೇ ಕ್ರಮವಾಗಿ ಪ್ರೌಢ ಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳ ಶಿಕ್ಷಕರ ಹುದ್ದೆಗೆ ಪದೋನ್ನತಿ ಪಡೆಯುವುದರಿಂದ ಮತ್ತು ಕೆಳಗಿನ ಹುದ್ದೆಯಲ್ಲಿ ಈ ಮೇಲಿನ ಎಲ್ಲಾ ಸೌಲಭ್ಯಗಳನ್ನು ಕಿರಿಯ ಶಿಕ್ಷಕನು ಪಡೆದ ಕಾರಣಕ್ಕೆ ಹಿರಿಯ ಮತ್ತು ಕಿರಿಯ ಶಿಕ್ಷಕರ ವೇತನದಲ್ಲಿ ಉಂಟಾಗಿರುವ ವೇತನ ವ್ಯತ್ಯಾಸವನ್ನು ಹಿರಿಯ ಮತ್ತು ಕಿರಿಯ ಶಿಕ್ಷಕರ ವೇತನದಲ್ಲಿನ ತಾರತಮ್ಯ ಎಂದು ಪರಿಗಣಿಸಲು ಬರುವುದಿಲ್ಲ. ಏಕೆಂದರೆ, ಸದರಿ ತಾರತಮ್ಯವು ಉಂಟಾದ ಅವಧಿಯಲ್ಲಿ ಅವರು ಕಾರ್ಯನಿರ್ವಹಿಸುತ್ತಿರುವ ವೃಂದ ಮತ್ತು ಅದಕ್ಕೆ ನಿಗದಿಪಡಿಸಲಾದ ವೇತನ ಶ್ರೇಣಿ ಪರಸ್ಪರ ಭಿನ್ನವಾಗಿದ್ದು, ಅವುಗಳನ್ನು ಹೋಲಿಸಲು ಬರುವುದಿಲ್ಲವಾದ್ದರಿಂದ ಹಿರಿಯ ಶಿಕ್ಷಕರ ವೇತನವನ್ನು ಕಿರಿಯ ಶಿಕ್ಷಕರ ವೇತನದ ಸಮಕ್ಕೆ ಎತ್ತರಿಸುವ ಪ್ರಮೇಯ ಉದ್ಭವಿಸುವುದಿಲ್ಲ. ಮುಂದುವರೆದು, ಒಂದೊಮ್ಮೆ ಹಿರಿಯ ಶಿಕ್ಷಕನು 10 ಮತ್ತು 15 ವರ್ಷಗಳ ಪದೋನ್ನತಿ ರಹಿತ ಸೇವೆಗಾಗಿ ನಿಯಮಾನುಸಾರ ಲಭ್ಯವಿರುವ ಕಾಲಬದ್ಧ ಮುಂಬಡ್ತಿ ಹಾಗೂ ಹಿರಿಯ ವೇತನ ಶ್ರೇಣಿ ಮುಂಬಡ್ತಿ ಸೌಲಭ್ಯಗಳನ್ನು ಪಡೆಯುವುದಕ್ಕೂ ಪೂರ್ವದಲ್ಲಿಯೇ ಪದೋನ್ನತಿ ಪಡೆದಲ್ಲಿ, ಸಂದರ್ಭಾನುಸಾರ ಅಂತಹ ಹಿರಿಯ ಶಿಕ್ಷಕನು ಸದರಿ ಸೌಲಭ್ಯಗಳನ್ನು ಪಡೆಯವುದಕ್ಕೋಸ್ಕರ ಕೆಳಗಿನ ಹಂತದ ವೇತನ ಶ್ರೇಣಿಯಲ್ಲಿಯೇ ಮುಂದುವರೆಯಲು ಲಿಖಿತ ಅಭಿಮತವನ್ನು ಪದೋನ್ನತಿ ಪಡೆದ 2 ತಿಂಗಳೊಳಗಾಗಿ ಸಲ್ಲಿಸಬಹುದು ಅಥವಾ ಅನುಕೂಲವಿಲ್ಲದ ಸಂದರ್ಭದಲ್ಲಿ ಸದರಿ ಸೌಲಭ್ಯಗಳನ್ನು ಅವನು ಪದೋನ್ನತಿ ಪಡೆದಲ್ಲಿ ಅಂತಹ ಸಂದರ್ಭದಲ್ಲಿ ಹಿರಿಯ ಶಿಕ್ಷಕನು ಕಾರ್ಯನಿರ್ವಹಿಸುತ್ತಿರುವ ವೃಂದಕ್ಕೆ ಕಿರಿಯ ಶಿಕ್ಷಕನು ಪದೋನ್ನತಿ ಪಡೆದಲ್ಲಿ ಅಂತಹ ಸಂದರ್ಭದಲ್ಲಿ ಹಿರಿಯ ಶಿಕ್ಷಕನ ವೇತನ ತಾರತಮ್ಯವನ್ನು ಸರಿಪಡಿಸಲು ಅವಕಾಶಗಳನ್ನು ಕಲ್ಪಿಸಲಾಗಿರುತ್ತದೆ. ಇಂತಹ ಸಂದರ್ಭಗಳಲ್ಲಿ ಅನ್ವಯಿಸುವ ಆದೇಶಗಳಲ್ಲಿನ ನಿಬಂಧನೆಗಳ ಪೂರೈಕೆಗೊಳಪಟ್ಟು ಹಿರಿಯ ಶಿಕ್ಷಕನ ವೇತನವನ್ನು ಕಿರಿಯ ಶಿಕ್ಷಕನ ವೇತನದ ಸಮಕ್ಕೆ ಎತ್ತರಿಸಬಹುದಾಗಿರುತ್ತದೆ". ಈ ಹಿನ್ನೆಲೆಯಲ್ಲಿ

		ಈಗಾಗಲೇ ಬಡ್ತಿ ಹೊಂದಿದ ಶಿಕ್ಷಕರಿಗೆ ಬಡ್ತಿ ಹೊಂದದ ಕಾರಣಕ್ಕಾಗಿ ಪಡೆಯುವ ಕಾಲಮಿತಿ ಬಡ್ತಿಗಳನ್ನು ನೀಡಲು ಸಾಧ್ಯವಿರುವುದಿಲ್ಲ.
ಇ)	01.02.2008 ನಂತರ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ನೇಮಕಗೊಂಡ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ ಎಕ್ಸ್‌ಗ್ರೇಷಿಯಾ ನೀಡದಿರುವುದು ನಿಜವೇ;	ಹೌದು. ಸರ್ಕಾರದ ಆದೇಶ ಸಂಖ್ಯೆ: ಇಡಿ 255 ಎಸ್‌ಎಲ್‌ಬಿ 2016, ದಿನಾಂಕ:23/07/2018 ರನ್ವಯ ದಿನಾಂಕ: 01/08/2008ರ ನಂತರ ಪ್ರೌಢಶಾಲೆಗಳಿಗೆ ನೇಮಕಗೊಂಡು ಕರ್ತವ್ಯಕ್ಕೆ ಹಾಜರಾದ ಶಿಕ್ಷಕರುಗಳಿಗೆ ವಿಶೇಷ ಭತ್ಯೆ ನೀಡಲು ಅವಕಾಶವಿರುವುದಿಲ್ಲ.
ಈ)	ನೀಡಿದ್ದಲ್ಲಿ, ಇದಕ್ಕೆ ಕಾರಣಗಳೇನು; ಸರ್ಕಾರದ ನಿಲುವುಗಳೇನು; ಯಾವ ಕಾಲಮಿತಿಯೊಳಗೆ ನೀಡಲಾಗುವುದು?	ಉದ್ಭವಿಸುವುದಿಲ್ಲ.

ಸಂಖ್ಯೆ: ಇಪಿ 46 ಎಸ್‌ಓಹೆಚ್ 2021

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ
ಸಚಿವರು